ಪ್ರಸಾರದ ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸಿ : 080-22537345 / 7624965333 / 8884432303

## 23,24ರಂದು ಅಂತರ್ ಕಾಲೇಜು ಕಬಡ್ಡಿ



**ಕಾರ್ಕಳ:** ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಾರ್ಕಳ ಹಾಗೂ ಮಂಗಳೂರು ವಿಶ್ವವಿದ್ಯಾಲಯದ ಜಂಟಿ ಆಶ್ರಯದಲ್ಲಿ ಅಂತರ್ ಕಾಲೇಜು ಮಹಿಳೆಯರ ಕಬಡ್ಡಿ ಚಾಂಪಿಯನ್‌ಶಿಪ್ ಸೆ.23, 24ರಂದು ಪೆರ್ವಾಜೆ ಶ್ರೀ ನಾರಾಯಣ ಗುರು ಸಭಾಭವನದಲ್ಲಿ ಜರುಗಲಿದೆ. ಬೆಳಗ್ಗೆ 9.30ಕ್ಕೆ ಶಾಸಕ ವಿ.ಸುನೀಲ್ ಕುಮಾರ್ ಪಂದ್ಯಾಟ ಉದ್ಘಾಟಿಸಲಿದ್ದಾರೆ. ಉದ್ಯಮಿಗಳಾದ ಡಿ.ಆರ್.ರಾಜು, ರೋಹಿತ್‌ಕುಮಾರ್ ಕಟೀಲ್, ಮಂಗಳೂರು ವಿಶ್ವವಿದ್ಯಾಲಯದ ಕ್ರೀಡಾ ವಿಭಾಗದ ನಿರ್ದೇಶಕ ಡಾ.ಕಿಶೋರ್‌ಕುಮಾರ್ ಸಿ.ಕೆ ಭಾಗವಹಿಸಲಿದ್ದಾರೆ. ಮಂಗಳೂರು ವಿಶ್ವವಿದ್ಯಾಲಯ ವ್ಯಾಪ್ತಿಯ 35 ಕಾಲೇಜುಗಳ 350ಕ್ಕೂ ಹೆಚ್ಚು ಮಹಿಳಾ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ ಎಂದು ಮಂಜುನಾಥ ಪೈ ಕಾಲೇಜಿನ ಪ್ರಾಂಶುಪಾಲ ಪ್ರೊ.ಶ್ರೀವರ್ಮ ಅಜ್ರಿ ತಿಳಿಸಿದ್ದಾರೆ.